5. 9ನೇ ತರಗತಿ ಯಿಂದ 12ನೇ ತರಗತಿಯವರೆಗೆ ಓದುತ್ತಿರುವ ವಿದ್ಯಾರ್ಥಿಗಳಿಗೆ ಪ್ರತಿ ವರ್ಷ ರೂ. 1200/– ಗಳ ವಿದ್ಯಾರ್ಥಿ ವೇತನ (ಎರಡು ಮಕ್ಕಳಿಗೆ ಸೀಮಿತ)

(ಇ) ಬಡತನ ರೇಖೆಗಿಂತ ಕೆಳಗಿರುವ ಗ್ರಾಮೀಣ ಭೂ ರಹಿತ ಕುಟುಂಬಗಳ ಜೊತೆಗೆ ಕಾರ್ಮಿಕ ಇಲಾಖೆಯ ಜನಶ್ರೀ ಭೀಮಾ ಯೋಜನೆಯ 72 ವಿವಿಧ ಕಸುಬುಗಳನ್ನು ಮಾಡುತ್ತಿರುವ ಕಸುಬುದಾರರು 18 ರಿಂದ 59 ವರ್ಷದೊಳಗಿನ ಕುಟುಂಬದ ಮುಖ್ಯಸ್ಥರು/ಮುಖ್ಯ ಪೋಷಕರು ಆಮ್ ಆದ್ಮಿ ಭೀಮಾ ಯೋಜನೆಯಡಿ ಫಲಾನುಭಗಳಾಗಲು ಅರ್ಹರಿರುತ್ತಾರೆ.

(ಈ) ಸರ್ಕಾರದ ಆದೇಶ ಸಂ. ಆರ್.ಡಿ 52 ಡಿಎಸ್‌ಪಿ 2012, ದಿನಾಂಕ : 18–7–2013 ರಂತ ಕಾರ್ಮಿಕ ಇಲಾಖೆಯ ಜನಶ್ರೀ ಭೀಮಾ ಯೋಜನೆಯನ್ನು ಕಂದಾಯ ಇಲಾಖೆಯ ಆಮ್ ಆದ್ಮಿ ಭೀಮಾ ಯೋಜನೆಯೊಂದಿಗೆ ವಿಲೀನಗೊಳಿಸಲಾಗಿದೆ.

ಜನಶ್ರೀ ಭೀಮಾ ಯೋಜನೆ ಹಾಗೂ ಆಮ್ ಆದ್ಮಿ ಭೀಮಾ ಯೋಜನೆಯ ಸ್ವರೂಪ ಹಾಗೂ ಗುಣಲಕ್ಷಣಗಳು ಒಂದೇ ರೀತಿಯಾದುದರಿಂದ, ಎರಡೂ ಯೋಜನೆಗಳನ್ನು ವಿಲೀನಗೊಳಿಸಿ "ಆಮ್ ಆದ್ಮಿ ಭೀಮಾ ಯೋಜನೆ" ಎಂದು ಮರು ನಾಮೀಕರಿಸಲು ಭಾರತ ಸರ್ಕಾರ ತೀರ್ಮಾನಿಸಿದ ಹಿನ್ನೆಲೆಯಲ್ಲಿ ಸಚಿವ ಸಂಪುಟದಲ್ಲಿ ವಿಷಯವನ್ನು ಮಂಡಿಸಿ ವಿಲೀನಗೊಳಿಸಲಾಗಿರುತ್ತದೆ.

ಈ ಮೊದಲು ಗ್ರಾಮೀಣ ಭೂ ರಹಿತ ಕುಟುಂಬಗಳಿಗೆ ಮಾತ್ರ ಆಮ್ ಆದ್ಮಿ ಭೀಮಾ ಯೋಜನೆಯಡಿ ಸೌಲಭ್ಯ ಕಲ್ಪಿಸಲಾಗಿದ್ದು, ಪ್ರಸ್ತುತ ಜನಶ್ರೀ ಭೀಮಾ ಯೋಜನೆಯನ್ನು ವಿಲೀನಗೊಳಿಸಿರುವುದರಿಂದ 72 ವಿವಿಧ ಕಸುಬುದಾರರ ಕುಟುಂಬಗಳಿಗೂ ವಿಮಾ ಯೋಜನೆಯ ಸೌಲಭ್ಯವನ್ನು ಕಲ್ಪಿಸಲಾಗಿದೆ. (ಸರ್ಕಾರದ ಆದೇಶದ ಪ್ರತಿಯನ್ನು ಲಗತ್ತಿಸಿದೆ)

(ಉ) ಕೊರಟಗೆರೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಈ ಯೋಜನೆಯಡಿ ಒಟ್ಟು 2321 ಫಲಾನುಭವಿಗಳು ನೋಂದಾಯಿಸಿ ಗುರುತಿಸಲಾಗಿದೆ. ಈ ಪೈಕಿ ಮೇ–2014ರ ಅಂತ್ಯಕ್ಕೆ ಇಬ್ಬರು ಫಲಾನುಭವಿಗಳು ಕ್ಲೇಮ್ ಸೌಲಭ್ಯವನ್ನು ಪಡೆದಿರುತ್ತಾರೆ.

ಕ್ರೀಡಾ ತರಬೇತುದಾರರ ಕೊರತೆ ಮತ್ತು ಕ್ರೀಡಾಪಟುಗಳ ಸಮರ್ಪಕ ಬಳಕೆ

61 (102) ಶ್ರೀ ಸುಧಾಕರ ಲಾಲ್ ಪಿ.ಆರ್. (ಕೊರಟಗೆರೆ) :– ಮಾನ್ಯ ಯುವಜನ ಸೇವಾ ಹಾಗೂ ಮೀನುಗಾರಿಕೆ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ :–

(ಅ) ರಾಜ್ಯದಲ್ಲಿ ತಾಲ್ಲೂಕು ಹಂತದಲ್ಲಿ ಕ್ರೀಡಾ ತರಬೇತುದಾರರಿಲ್ಲದೇ ಕ್ರೀಡಾಪಟುಗಳಿಗೆ ಕ್ರೀಡೆಗಳ ಬಗ್ಗೆ ಸರಿಯಾಗಿ ಮಾರ್ಗದರ್ಶನ ಸಿಗದೇ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ತಾಲ್ಲೂಕು ಕ್ರೀಡಾಂಗಣಗಳಲ್ಲಿ ಒಬ್ಬ ತರಬೇತುದಾರರನ್ನು ನೇಮಕ ಮಾಡಿ ಕ್ರೀಡಾಪಟುಗಳು ಹೆಚ್ಚಿನ ಆಸಕ್ತಿ ವಹಿಸುವ ಕ್ರೀಡೆಗಳ ಬಗ್ಗೆ ಮಾರ್ಗದರ್ಶನ ನೀಡುವ ಕುರಿತು ಸರ್ಕಾರ ಅಗತ್ಯ ಕ್ರಮ ಕೈಗೊಳ್ಳವುದೇ ;

(ಇ) ರಾಜ್ಯದಲ್ಲಿ ಕೇವಲ 04 ಖಾಯಂ ಸಿಬ್ಬಂದಿ ಹಾಗೂ ಕರ್ನಾಟಕ ಕ್ರೀಡಾ ಪ್ರಾಧಿಕಾರದ ವತಿಯಿಂದ ಕಾರ್ಯ ನಿರ್ವಹಿಸುತ್ತಿರುವ 91 ತರಬೇತುದಾರರಿಂದ ಕ್ರೀಡೆಗಳ ಬಗ್ಗೆ ಕ್ರೀಡಾಪಟುಗಳಿಗೆ ಸರಿಯಾದ ಮಾರ್ಗದರ್ಶನ ಸಿಗುತ್ತಿದೆಯೇ ; ಹಾಗಿದ್ದಲ್ಲಿ, ಯಾವ ರೀತಿ ಮಾರ್ಗದರ್ಶನ ಸಿಗುತ್ತಿದೆ ; (ವಿವರ ನೀಡುವುದು)

(ಈ) ರಾಜ್ಯದಲ್ಲಿ ಇಲಾಖೆಯಿಂದ 155 ಕ್ರೀಡಾಂಗಣಗಳನ್ನು ನಿರ್ಮಾಣ ಮಾಡಲಾಗಿದ್ದು, ಸದರಿ ಕ್ರೀಡಾಂಗಣಗಳ ನಿರ್ವಹಣೆಯನ್ನು ಯಾವ ಇಲಾಖೆಯ ಅಧಿಕಾರಿಗಳು ನಿರ್ವಹಿಸುತ್ತಿದ್ದಾರೆ ;

(ಉ) ರಾಜ್ಯದಲ್ಲಿರುವ ಕ್ರೀಡಾಂಗಣಗಳನ್ನು ಅವಶ್ಯಕತೆ (ಕ್ರೀಡಾಕೂಟಗಳು) ಇದ್ದಾಗ ಬಳಸಿಕೊಂಡು ಅನಂತರ ಕ್ರೀಡಾಂಗಣವನ್ನು ಸಮರ್ಪಕವಾದ ರೀತಿಯಲ್ಲಿ ಬಳಸಿಕೊಳ್ಳದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಹಾಗಿದ್ದಲ್ಲಿ, ಇಲಾಖೆಯ ಕ್ರೀಡಾಂಗಣಗಳ ನಿರ್ವಹಣೆ ಮತ್ತು ಸಮರ್ಪಕವಾದ ಬಳಕೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಪೂರ್ಣ ವಿವರ ನೀಡುವುದು)

ಶ್ರೀ ಕೆ. ಅಭಯ ಚಂದ್ರ (ಮಾನ್ಯ ಯುವಜನ ಸೇವಾ ಹಾಗೂ ಮೀನುಗಾರಿಕೆ ಸಚಿವರು) :–

(ಅ) ಹೌದು

(ಆ) ಕರ್ನಾಟಕ ಕ್ರೀಡಾ ಪ್ರಾಧಿಕಾರಕ್ಕೆ ಒಟ್ಟು 192 ತರಬೇತುದಾರರುಗಳ ಹುದ್ದೆಗಳ ಸೃಜನೆಗೆ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ. ಅಲ್ಲದೇ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯನ್ನು ಪುನರ್ ರಚಿಸಿ ಬಲಪಡಿಸುವುದಾಗಿ ಸನ್ಮಾನ್ಯ ಮುಖ್ಯಮಂತ್ರಿಗಳು 2014–15ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿದ್ದು, ತರಬೇತುದಾರರ ಹುದ್ದೆಗಳ ಸಹಿತ ಹೆಚ್ಚುವರಿ ಹುದ್ದೆಗಳನ್ನು ಸೃಜಿಸಿ, ಇಲಾಖೆಯನ್ನು ಬಲಪಡಿಸಲು ಮತ್ತು ಕ್ರೀಡಾಪಟುಗಳಿಗೆ ಅಗತ್ಯ ಸೌಲಭ್ಯ ಹಾಗೂ ಮಾರ್ಗದರ್ಶನ ಒದಗಿಸಲು ಆದ್ಯತೆಯ ಮೇಲೆ ಕ್ರಮ ಕೈಗೊಳ್ಳಲಾಗುವುದು.

(ಇ) ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ಕ್ರೀಡಾ ಪ್ರಾಧಿಕಾರದ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ತರಬೇತುದಾರರುಗಳಿಂದ ರಾಜ್ಯದ ಕ್ರೀಡಾಪಟುಗಳಿಗೆ ಉತ್ತಮ ತರಬೇತಿ ಮತ್ತು ಮಾರ್ಗದರ್ಶನ ದೊರಕುತ್ತಿದೆ.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ನಡೆಸಲ್ಪಡುತ್ತಿರುವ ಕ್ರೀಡಾ ವಸತಿ ನಿಲಯ ಹಾಗೂ ಕ್ರೀಡಾ ಶಾಲೆಗಳಲ್ಲಿ ರಾಜ್ಯದ 1500 ಕ್ಕೂ ಹೆಚ್ಚು ಯುವ ಪ್ರತಿಭಾವಂತ ಕ್ರೀಡಾಪಟುಗಳಿಗೆ

ಅವಕಾಶ ಕಲ್ಪಿಸಲಾಗಿದ್ದು, ಈ ಕ್ರೀಡಾಪಟುಗಳಿಗೆ ಅನುಭವಿ ತರಬೇತುದಾರರಿಂದ ವೈಜ್ಞಾನಿಕ ಕ್ರೀಡಾ ತರಬೇತಿ, ಉಚಿತ ಕ್ರೀಡಾ ಕಿಟ್, ವಸತಿ ಹಾಗೂ ಊಟೋಪಹಾರ ವ್ಯವಸ್ಥೆ ಕಲ್ಪಿಸಲಾಗಿದೆ. ತರಬೇತುದಾರರು ಅಲ್ಪಾವಧಿ, ಮಧ್ಯಮಾವಧಿ ಮತ್ತು ದೀರ್ಘಾವಧಿ ತರಬೇತಿ ಯೋಜನೆಯೊಂದಿಗೆ ಕ್ರೀಡಾಪಟುಗಳಿಗೆ ಮಾರ್ಗದರ್ಶನ ನೀಡುತ್ತಿದ್ದಾರೆ. 2013–14ನೇ ಸಾಲಿನಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಯುವ ಕ್ರೀಡಾಪಟುಗಳು ಮಾನ್ಯತೆ ಪಡೆದ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ರಾಜ್ಯ ಮಟ್ಟದ–458, ರಾಷ್ಟ್ರ ಮಟ್ಟದ–65 ಮತ್ತು ಅಂತರ–ರಾಷ್ಟ್ರೀಯ ಮಟ್ಟದ–02 ಪದಕಗಳನ್ನು ಗೆದ್ದು ರಾಜ್ಯಕ್ಕೆ ಕೀರ್ತಿ ತಂದಿದ್ದಾರೆ.

(ಈ) ರಾಜ್ಯದಲ್ಲಿ ಇಲಾಖೆಯಿಂದ ನಿರ್ಮಿಸಿರುವ ಕ್ರೀಡಾಂಗಣಗಳನ್ನು ಆಯಾ ಜಿಲ್ಲೆಯ ಅಪರ ಜಿಲ್ಲಾಧಿಕಾರಿಗಳು ಮತ್ತು ಆಯಾ ತಾಲ್ಲೂಕಿನ ಉಪ ವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ಕ್ರಮವಾಗಿ ಜಿಲ್ಲಾ ಕ್ರೀಡಾಂಗಣ ಸಮಿತಿ ಮತ್ತು ತಾಲ್ಲೂಕು ಕ್ರೀಡಾಂಗಣ ಸಮಿತಿಗಳ ಮೂಲಕ ನಿರ್ವಹಿಸಲಾಗುತ್ತಿದೆ. ಸದರಿ ಸಮಿತಿಗಳಿಗೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳಾದ ಉಪ ನಿರ್ದೇಶಕರು/ಸಹಾಯಕ ನಿರ್ದೇಶಕರು ಕಾರ್ಯದರ್ಶಿಗಳಾಗಿದ್ದು, ನಿಯಮಾನುಸಾರ ನಿರ್ವಹಿಸಲಾಗುತ್ತಿದೆ.

(ಉ) ರಾಜ್ಯದಲ್ಲಿರುವ ಕ್ರೀಡಾಂಗಣಗಳನ್ನು ವರ್ಷಪೂರ್ತಿ ಕ್ರೀಡಾಪಟುಗಳ ಬಳಕೆಗೆ ಉಚಿತವಾಗಿ ಮತ್ತು ಮುಕ್ತವಾಗಿ ಒದಗಿಸಲಾಗುತ್ತಿದೆ. ಸರ್ಕಾರದ ವಿವಿಧ ಇಲಾಖೆಗಳು, ಕ್ರೀಡಾ ಸಂಸ್ಥೆಗಳು ಮತ್ತು ಸಾರ್ವಜನಿಕರು ಕ್ರೀಡಾಂಗಣಗಳನ್ನು ಸ್ಥಳೀಯ, ತಾಲ್ಲೂಕು, ಜಿಲ್ಲಾ, ರಾಜ್ಯ ಮತ್ತು ರಾಷ್ಟ್ರ ಮಟ್ಟದ ಕ್ರೀಡಾಕೂಟಗಳನ್ನು ಆಯೋಜಿಸಲು ಬಳಸುತ್ತಿದ್ದಾರೆ.

(ಊ) ಇಲಾಖೆಯ ಕ್ರೀಡಾಂಗಣಗಳ ನಿರ್ವಹಣೆ ಮತ್ತು ಸಮರ್ಪಕವಾಗಿ ಬಳಸಿಕೊಳ್ಳಲು ಪ್ರತಿ ಜಿಲ್ಲೆಯಲ್ಲಿ ಜಿಲ್ಲಾ ಕ್ರೀಡಾಂಗಣ ಸಮಿತಿ ಹಾಗೂ ತಾಲ್ಲೂಕು ಮಟ್ಟದಲ್ಲಿ ತಾಲ್ಲೂಕು ಕ್ರೀಡಾಂಗಣ ಸಮಿತಿಗಳಿಗೆ ಕ್ರೀಡಾಂಗಣ ನಿರ್ವಹಣೆಯ ಜವಾಬ್ದಾರಿಯನ್ನು ನೀಡಲಾಗಿದೆ.

ಕಾರ್ಮಿಕ ವಿಮಾ ಚಿಕಿತ್ಸಾ ಕೇಂದ್ರ ಸ್ಥಾಪಿಸುವುದು

62 (103) ಶ್ರೀ ಸುಧಾಕರ ಲಾಲ್ ಪಿ.ಆರ್. :– ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ :–

(ಅ) ವಸಂತನರಸಾಪುರ ಕೈಗಾರಿಕಾ ಪ್ರದೇಶದಲ್ಲಿ ಕಾರ್ಮಿಕ ವಿಮಾ ಚಿಕಿತ್ಸಾ ಕೇಂದ್ರವಿಲ್ಲದೇ ಅಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕಾರ್ಮಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;